# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕರ್ನಾಟಕ ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿ ಅಭಿವೃದ್ಧಿ ಯೋಜನೆ (ಮುನ್ನೋಟ ವರದಿ) ತಯಾರಿಸುವ ಕುರಿತು.

**ಓದಲಾಗಿದೆ:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರ ಅಧ್ಯಕ್ಷತೆಯಲ್ಲಿ ದಿನಾಂಕ: 16.06.2015ರಂದು ನಡೆದ ಟಾಸ್ಕ್‌ಫೋರ್ಸ್ ಸಮಿತಿ ಸಭೆಯ ನಡವಳಿಗಳು.
2. ದಿನಾಂಕ 08.07.2015ರಿಂದ ದಿ:13.07.2015ರವರೆಗೆ ಕೇರಳ, ತ್ರಿಶೂರ್‌ನ ಕಿಲಾ ಸಂಸ್ಥೆಯಲ್ಲಿ ನಡೆದ ಬರಹಗಾರರ ಕಾರ್ಯಾಗಾರ (Write shop) ದಲ್ಲಿ ಹೊರಹೊಮ್ಮಿದ ಅಭಿಪ್ರಾಯಗಳು.
3. ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣ ಅಭಿವೃದ್ಧಿ ಮತ್ತು ಪಂ.ರಾಜ್ ಸಂಸ್ಥೆ, ಮೈಸೂರು ರವರ ಮಿಂಚಂಚೆ ದಿನಾಂಕ: 05.08.2015.

**ಪ್ರಸ್ತಾವನೆ:**

ಮೇಲೆ ಓದಲಾದ (1)ರ ಸಭೆಯಲ್ಲಿ ಕೇಂದ್ರ ಸರ್ಕಾರದ ಪಂಚಾಯತ್ ರಾಜ್ ಮಂತ್ರಾಲಯದ ಕಾರ್ಯದರ್ಶಿಗಳು ಪ್ರಸ್ತಾಪಿಸಿದಂತೆ, 14ನೇ ಹಣಕಾಸು ಆಯೋಗದ ಅನುದಾನದ ಮೂಲಕ ಗ್ರಾಮ ಪಂಚಾಯತಿಗಳಿಗೆ 13ನೇ ಹಣಕಾಸು ಆಯೋಗದ ಅನುದಾನಕ್ಕಿಂತ ಸರಿಸುಮಾರು ಐದು ಪಟ್ಟು ಹೆಚ್ಚು ಅನುದಾನಗಳು ಲಭ್ಯವಾಗಲಿವೆ. 14ನೇ ಹಣಕಾಸು ಆಯೋಗದ ಅನುದಾನಗಳು ಸೇರಿದಂತೆ ಗ್ರಾಮ ಪಂಚಾಯತಿಗಳಿಗೆ ಇತರೆ ಎಲ್ಲಾ ಮೂಲಗಳಿಂದ ಲಭ್ಯವಾಗುವ ಅನುದಾನಗಳನ್ನು ಒಳಗೊಂಡು ವಿನಿಯೋಗಿಸುವ ಬಗ್ಗೆ ಗ್ರಾಮ ಪಂಚಾಯತಿ ಹಂತದಲ್ಲಿ ಯೋಜನಾ ತಯಾರಿಕೆ ಮತ್ತು ಯೋಜನಾ ಅನುಷ್ಠಾನದ ಮೇಲ್ವಿಚಾರಣೆಯನ್ನು ವ್ಯವಸ್ಥಿತಗೊಳಿಸುವ ಅಗತ್ಯತೆ ಇರುತ್ತದೆ. ಈ ನಿಟ್ಟಿನಲ್ಲಿ ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿ, ಗ್ರಾಮ ಪಂಚಾಯತ್ ಹಂತದ ಯೋಜನೆಯನ್ನು ತಯಾರಿಸಬೇಕೆಂದು ನಿರ್ಣಯಿಸಲಾಗಿದೆ. ಈ ಬಗ್ಗೆ ದಿನಾಂಕ 07.07.2015ರಿಂದ ದಿನಾಂಕ 13.07.2015ರವರೆಗೆ ಕೇರಳದ ಕಿಲಾ ಸಂಸ್ಥೆಯಲ್ಲಿ ಯೋಜನಾ ತಯಾರಿಕೆಯ ಬಗ್ಗೆ "ರೈಟ್‌ಶಾಪ್" ಕಾರ್ಯಾಗಾರವನ್ನು ಆಯೋಜಿಸಲಾಗಿತ್ತು. ಸದರಿ ಕಾರ್ಯಾಗಾರದಲ್ಲಿ ಕರ್ನಾಟಕ ರಾಜ್ಯಕ್ಕೆ ಸರಿಹೊಂದುವಂತಹ ಯೋಜನಾ ತಯಾರಿಕಾ ಮಾರ್ಗಸೂಚಿಗಳನ್ನು ಸಿದ್ಧಪಡಿಸಿಕೊಂಡು ಗ್ರಾಮ ಪಂಚಾಯತಿ ಅಭಿವೃದ್ಧಿ ಯೋಜನೆ ತಯಾರಿಸಿ ಅನುಷ್ಠಾನ ಮಾಡಬೇಕೆಂದು ಅಭಿಪ್ರಾಯಿಸಲಾಗಿದೆ. ರೈಟ್ ಶಾಪ್‌ನಲ್ಲಿ ಹೊರಹೊಮ್ಮಿದ ಸಲಹೆ ಮತ್ತು ಅಭಿಪ್ರಾಯಗಳಿಗನುಸಾರವಾಗಿ ರೈಟ್‌ಶಾಪ್‌ನಲ್ಲಿ ಭಾಗವಹಿಸಿದ್ದ ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆಯ ಅಧಿಕಾರಿಗಳು ಗ್ರಾಮ ಪಂಚಾಯತಿ ಅಭಿವೃದ್ಧಿ ಯೋಜನಾ ತಯಾರಿಕೆಗಾಗಿ ಕೈಪಿಡಿಯನ್ನು (ಟೂಲ್ ಕಿಟ್) ತಯಾರಿಸಿ ಅನುಮೋದನೆಗಾಗಿ ಓದಲಾದ (3)ರ ಪತ್ರದಲ್ಲಿ ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಯೋಜನಾ ತಯಾರಿಕಾ ಕೈಪಿಡಿಯನ್ನು ಅನುಮೋದಿಸುವ ಬಗ್ಗೆ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾ.ಅ&ಪಂ.ರಾಜ್ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ದಿನಾಂಕ 26.08.2015ರಂದು ಸಭೆಯನ್ನು ನಡೆಸಲಾಯಿತು. ಸಭೆಯಲ್ಲಿ ಯೋಜನಾ ತಯಾರಿಕಾ ಕೈಪಿಡಿಯ ಬಗ್ಗೆ ಸಾಕಷ್ಟು ಚರ್ಚಿಸಿ, ಅಲ್ಪಸ್ವಲ್ಪ ಬದಲಾವಣೆಯೊಂದಿಗೆ ಅಂಗೀಕರಿಸಲು ತೀರ್ಮಾನಿಸಲಾಯಿತು. ಯೋಜನಾ ತಯಾರಿಕಾ ಕೈಪಿಡಿಯ ಪ್ರಕಾರ ರಾಜ್ಯದ

ಎಲ್ಲಾ 6017 ಗ್ರಾಮ ಪಂಚಾಯಿತಿಗಳಲ್ಲಿ ಗ್ರಾಮ ಪಂಚಾಯತ್ ಅಭಿವೃದ್ಧಿ ಯೋಜನೆ ತಯಾರಿಸಲು ತೀರ್ಮಾನಿಸಿದ್ದು, ಅದಕ್ಕಾಗಿ ಈ ಆದೇಶ

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 90 ಜಿಪಸ 2015, ಬೆಂಗಳೂರು ದಿನಾಂಕ 31.08.2015**

ಪ್ರಸ್ತಾವನೆಯಲ್ಲಿ ವಿವರಿಸಿದ ಎಲ್ಲಾ ಅಂಶಗಳನ್ನು ಪರಿಗಣನೆಗೆ ತೆಗೆದುಕೊಂಡು, ಗ್ರಾಮ ಪಂಚಾಯತಿ ಅಭಿವೃದ್ಧಿ ಯೋಜನೆಯನ್ನು ತಯಾರಿಸಲು ಸರ್ಕಾರವು ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳಿಗೆ ಈ ಕೆಳಕಾಣಿಸಿದ ಸೂಚನೆಗಳನ್ನೊಳಗೊಂಡಂತೆ ಆದೇಶಿಸಿದೆ.

1. ಈ ಆದೇಶದ ಜೊತೆಯಲ್ಲಿ ಲಗತ್ತಿಸಿರುವ ಯೋಜನಾ ತಯಾರಿಕಾ ಕೈಪಿಡಿಯನ್ನು ಅನುಮೋದಿಸಿದೆ. ಮತ್ತು ಕೈಪಿಡಿಯಲ್ಲಿರುವ ಮಾರ್ಗಸೂಚಿಯಂತೆ ಗ್ರಾಮ ಪಂಚಾಯತ್ ಅಭಿವೃದ್ಧಿ ಯೋಜನೆಯನ್ನು ತಯಾರಿಸುವುದು.
2. ಯೋಜನಾ ತಯಾರಿಕಾ ಪ್ರಕ್ರಿಯೆಯನ್ನು ಅಕ್ಟೋಬರ್, 2015 ಮಾಹೆಯಿಂದ ಪ್ರಾರಂಭಿಸಿ ಡಿಸೆಂಬರ್, 2015ರ ಅಂತ್ಯದೊಳಗೆ ಪೂರ್ಣಗೊಳಿಸುವುದು.
3. ಕೈಪಿಡಿಯಲ್ಲಿ ತಿಳಿಸಿರುವಂತೆ ಜಿಲ್ಲಾ ಹಂತದಲ್ಲಿ, ತಾಲ್ಲೂಕು ಹಂತದಲ್ಲಿ ಮತ್ತು ಗ್ರಾಮ ಪಂಚಾಯಿತಿ ಹಂತದಲ್ಲಿ ಕೋರ್ ಕಮಿಟಿಗಳನ್ನು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ತಕ್ಷಣವೇ ರಚಿಸತಕ್ಕದ್ದು. ಯೋಜನಾ ತಯಾರಿಕೆಯ ಸಂಪೂರ್ಣ ಜವಾಬ್ದಾರಿಯು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳದ್ದಾಗಿರುತ್ತದೆ.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಯೋಜನಾ ತಯಾರಿಕಾ ಕಾರ್ಯದಲ್ಲಿ ತಮಗೆ ಸಮರ್ಥವಾಗಿ ಸಹಕರಿಸುವಂತಹ ಜಿಲ್ಲಾ ಪಂಚಾಯತಿ ಕಚೇರಿಯ ಹಿರಿಯ ಅಧಿಕಾರಿಯೊಬ್ಬರನ್ನು ಗುರುತಿಸಿ ನೋಡಲ್ ಅಧಿಕಾರಿಯನ್ನಾಗಿ ನೇಮಿಸತಕ್ಕದ್ದು.
5. ಜಿಲ್ಲಾ ಯೋಜನಾ ತಯಾರಿಕೆಗೆ ಪರಿಣಿತರ ಅಗತ್ಯತೆಯನ್ನು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಮನಗಂಡರೆ, ಈ ಪ್ರಕ್ರಿಯೆಯ ಅವಧಿಯಲ್ಲಿ ನೇಮಿಸಿಕೊಳ್ಳಬಹುದು.
6. ಗ್ರಾಮ ಪಂಚಾಯತ್‌ಗಳು ಯೋಜನಾ ತಯಾರಿಕೆಗಾಗಿ ಪ್ರತಿ ಪಂಚಾಯಿತಿಗೆ ಐದು ಜನ ಸಮುದಾಯ ಸ್ವಯಂ ಸೇವಕರನ್ನು ಕೈಪಿಡಿಯಲ್ಲಿ ನೀಡಿರುವ ಅರ್ಹತೆಗನುಗುಣವಾಗಿ ಗುರುತಿಸಿ, ನೇಮಿಸಿಕೊಳ್ಳತಕ್ಕದ್ದು.
7. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯು ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆಯು ನಡೆಸುವಂತಹ ಎಲ್ಲಾ ಸಾಮರ್ಥ್ಯಾಭಿವೃದ್ಧಿ ಕಾರ್ಯಕ್ರಮಗಳಿಗೆ ಸಂಬಂಧಿಸಿದ ಅಧಿಕಾರಿಗಳನ್ನು ನಿಯೋಜಿಸತಕ್ಕದ್ದು.
8. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯು ಪ್ರತಿ ಜಿಲ್ಲೆಗೆ ಐದು ಅಧಿಕಾರಿಗಳನ್ನು ಜಿಲ್ಲಾ ಸಂಪನ್ಮೂಲ ವ್ಯಕ್ತಿಗಳನ್ನಾಗಿ ಗುರುತಿಸತಕ್ಕದ್ದು. ಪ್ರತಿ ತಾಲ್ಲೂಕಿಗೆ ಐದು ಅಧಿಕಾರಿಗಳನ್ನು ತಾಲ್ಲೂಕು ಸಂಪನ್ಮೂಲ ವ್ಯಕ್ತಿಗಳನ್ನಾಗಿ ಗುರುತಿಸತಕ್ಕದ್ದು.
9. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯು ಪ್ರತಿ ಗ್ರಾಮ ಪಂಚಾಯಿತಿಗೆ ಅಥವಾ ಗ್ರಾಮ ಪಂಚಾಯಿತಿಗಳ ಒಂದು ಗುಚ್ಛಕ್ಕೆ ಯೋಜನಾ ತಯಾರಿಕೆ ಪ್ರಕ್ರಿಯೆ ಪೂರ್ಣಗೊಳ್ಳುವವರೆಗೆ ನೋಡಲ್ ಅಧಿಕಾರಿಗಳನ್ನು ನೇಮಿಸತಕ್ಕದ್ದು.

10. ಎನ್‌ಐಸಿ, ಬೆಂಗಳೂರುರವರು ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆಯ ಅಧಿಕಾರಿಗಳೊಂದಿಗೆ ಸಮಾಲೋಚನೆ ನಡೆಸಿ ಅಗತ್ಯ ತಂತ್ರಾಂಶವನ್ನು ಅಭಿವೃದ್ಧಿಪಡಿಸುವುದು.

11. ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆಯು ನಿಗಧಿಪಡಿಸಿರುವ ನಮೂನೆಯಲ್ಲಿ ಈ ಕೂಡಲೇ ಅಗತ್ಯ ಅಂಕಿಅಂಶಗಳನ್ನು ಕ್ರೋಢಿಕರಿಸಲು ಗ್ರಾಮ ಪಂಚಾಯತ್ ಮಟ್ಟದಲ್ಲಿ ಕ್ರಮಕೈಗೊಳ್ಳತಕ್ಕದ್ದು.

**12. ಪ್ರತಿ ಗ್ರಾಮ ಪಂಚಾಯಿತಿಯು ನೇಮಿಸಿಕೊಳ್ಳುವ ಸಮುದಾಯ ಸ್ವಯಂ ಸೇವಕರಿಗೆ ಕೈಪಿಡಿಯಲ್ಲಿ ತಿಳಿಸಿರುವಂತೆ ಅನುದಾನವನ್ನು ಪಾವತಿಸಬಹುದು. ಮತ್ತು ಒಟ್ಟಾರೆ ಪ್ರತಿ ಗ್ರಾಮ ಪಂಚಾಯಿತಿಯಲ್ಲಿ ಯೋಜನಾ ತಯಾರಿಕೆಗೆ ರೂ. 50,000/- ಮೀರದಂತೆ ತನ್ನ ಸ್ವಂತ ಸಂಪನ್ಮೂಲದಿಂದ ಭರಿಸಬಹುದು.**

13. ಸಾಮರ್ಥ್ಯಾಭಿವೃದ್ಧಿಗೆ ಅಗತ್ಯವಾದ ಅನುದಾನವನ್ನು ಕೇಂದ್ರ ಸರ್ಕಾರದ ಪಂಚಾಯತ್ ರಾಜ್ ಇಲಾಖೆಯು ರಾಜೀವ್‌ಗಾಂಧಿ ಪಂಚಾಯತ್ ಸಶಕ್ತಿಕರಣ ಅಭಿಯಾನ ಯೋಜನೆಯಡಿಯಲ್ಲಿ ಬಿಡುಗಡೆ ಮಾಡುವ ಅನುದಾನದಿಂದ ಅಥವಾ ಗ್ರಾಮಸ್ವರಾಜ್-2 ಯೋಜನೆಯಡಿಯಲ್ಲಿ ಬಿಡುಗಡೆಯಾಗುವ ಅನುದಾನದಿಂದ ಬಳಸಿಕೊಳ್ಳಬಹುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು
ಅವರ ಹೆಸರಿನಲ್ಲಿ,

**(ಕೆ.ರಮೇಶ್)**
ಸರ್ಕಾರದ ಅಧೀನ ಕಾರ್ಯದರ್ಶಿ (ಜಿ.ಪಂ),
ಗ್ರಾ.ಅ&ಪಂ.ರಾಜ್ ಇಲಾಖೆ.

**ಇವರಿಗೆ:**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣ ಅಭಿವೃದ್ಧಿ ಮತ್ತು ಪಂ.ರಾಜ್ ಸಂಸ್ಥೆ, ಮೈಸೂರು.
3. ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
4. ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯ ಎಲ್ಲಾ ಆಯುಕ್ತರು/ನಿರ್ದೇಶಕರು/ಅಧಿಕಾರಿಗಳು.
5. ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು.
6. ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.
7. ಕರ್ನಾಟಕ ವಿಕಾಸ/ವೆಬ್ ಸೈಟ್
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

**ಪ್ರತಿ:**

1. ಮಾನ್ಯ ಗ್ರಾ.ಅ&ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು.
2. ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ಗ್ರಾ.ಅ&ಪಂ.ರಾಜ್ ಇಲಾಖೆ.
3. ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿಗಳು, ಗ್ರಾ.ಅ&ಪಂ.ರಾಜ್ ಇಲಾಖೆ.